**ಓ.ಎಸ್. ನಂ. 81/2021** **ಪಿ.ಡಬ್ಲ್ಯೂ- 1**

**<u>ಸಾಕ್ಷಿಯನ್ನು ದಿನಾಂಕ 7.7.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

<u>ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ</u>

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. ಎರಡು ಕೈಬರಹದ ಪಹಣಿಗಳ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ1 ಮತ್ತು ನಿಪಿ2 ಎಂದು, ನಾಲ್ಕು ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅದನ್ನು ನಿಪಿ3 ರಿಂದ ನಿಪಿ6 ಎಂದು, ಮ್ಯುಟೇಶನ್ ರಿಜಿಸ್ಟರ್‌ನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ7 ಎಂದು, ಇ.ಸಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ8 ಎಂದು, ದಿನಾಂಕ 16.1.2009, 3.8.2019 ರಂದು ತಹಶೀಲ್ದಾರರವರು ನೀಡಿದ ಎರಡು ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ9 ಮತ್ತು ನಿಪಿ10 ಎಂದು, 2 ನೇ ವಾದಿಗೆ ಸಂಬಂಧಪಟ್ಟ ಎಂ.ಎಲ್.ಸಿ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ11 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಮುಂದೂಡಲಾಯಿತು

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.